# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 879 (1004) |
| ಮಾನ್ಯ ಸದಸ್ಯರ ಹೆಸರು | | ಡಾ: ತಳವಾರ್ ಸಾಬಣ್ಣ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 15.12.2025 |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದ 26 ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು (ವಿವರ ನೀಡುವುದು) | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಡಿ ಒಟ್ಟು 32 ಸಾರ್ವಜನಿಕ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತವೆ. ಸದರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ವಿವರವನ್ನು **ಅನುಬಂಧ-1 ರಲ್ಲಿರಿಸಿದೆ.** |
| ಆ) | ಸುಮಾರು ಎರಡು ದಶಕಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ತುಂಬದಿರಲು ಕಾರಣಗಳೇನು; ಖಾಲಿ ಹುದ್ದೆಗಳನ್ನು ತಕ್ಷಣವೇ ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ; | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಈ ಕೆಳಕಂಡ ಕಾರಣಗಳಿಂದ 2019 ರಿಂದ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿ ಪಕ್ರಿಯೆ ನಡೆದಿರುವುದಿಲ್ಲ;<br><br>• 2019 ರಿಂದ 2021ರವರೆಗೆ (2021ರ ಅಂತ್ಯದವರೆಗೆ) ಕೋವಿಡ್-19 ಸಮಸ್ಯೆಯಿಂದಾಗಿ ಖಾಲಿಯಿರುವ ನೇರನೇಮಕಾತಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯು ವಿಧಿಸಿರುವ ನಿರ್ಬಂಧಿಸಿರುತ್ತದೆ.<br>• ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿನ ಬೋಧಕ ಹುದ್ದೆಗಳನ್ನು ಯುಜಿಸಿ ಮಾರ್ಗಸೂಚಿಗಳನ್ವಯ ಭರ್ತಿ ಮಾಡಿಕೊಳ್ಳಬೇಕಾಗಿದ್ದು, ರಾಜ್ಯದ ವಿಶ್ವವಿದ್ಯಾಲಯಗಳು ವಿಭಿನ್ನ ಮಾದರಿಯಲ್ಲಿ ರಚಿಸಿಕೊಂಡಿರುವ ಪರಿನಿಯಮಗಳು ಯುಜಿಸಿ ಮಾರ್ಗಸೂಚಿಗಳನ್ವಯ ಇಲ್ಲದಿರುವ ಕಾರಣ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಸರ್ಕಾರದಿಂದ ಏಕರೂಪ ಪರಿನಿಯಮವನ್ನು ರಚಿಸಿಕೊಳ್ಳಲು ಸೂಚಿಸಿ ಅದರನ್ವಯ ವಿಶ್ವವಿದ್ಯಾಲಯಗಳು ಘನತೆವೆತ್ತ ರಾಜ್ಯಪಾಲರ ಅನುಮೋದನೆ ಪಡೆಯಲು ಕಾಲವಕಾಶ ತೆಗೆದುಕೊಂಡಿರುತ್ತವೆ.<br>• 2023ರಲ್ಲಿ ಮಾತೃ ವಿಶ್ವವಿದ್ಯಾಲಯಗಳಿಂದ ಬೇರ್ಪಟ್ಟು ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳು ಹಾಗೂ ರೂಸ ಯೋಜನೆಯಡಿ ಹೊಸ ವಿಶ್ವವಿದ್ಯಾಲಯಗಳು ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳಲ್ಲಿನ ಹುದ್ದೆಗಳ |

ವಿಲೀನಾತಿ ಪ್ರಕ್ರಿಯೆಯು ನೂತನ ಪಿಂಚಣಿ ವ್ಯವಸ್ಥೆಯಿಂದಾಗಿ ಪೂರ್ಣಗೊಳ್ಳದಿರುವುದರಿಂದ ಹಾಗೂ ವರ್ಗಾವಣೆಗೊಂಡ ಹುದ್ದೆಗಳಿಗೆ ಮೀಸಲಾತಿ ಬಿಂದುಗಳು, 371ಜೆ ಗುರುತಿಸುವಿಕೆ ಇತ್ಯಾದಿ ಕಾರಣಗಳಿಂದಾಗಿ ವಿಶ್ವವಿದ್ಯಾಲಯಗಳು ಯಾವುದೇ ನೇಮಕಾತಿ ಅಧಿಸೂಚನೆ ಹೊರಡಿಸಿರುವುದಿಲ್ಲ.

- 2024ರಲ್ಲಿ ಪರಿಶಿಷ್ಟ ಜಾತಿ ಒಳಮೀಸಲಾತಿಯಿಂದಾಗಿ ಸರ್ಕಾರದಿಂದ ಹೊರಡಿಸಿರುವ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ2025, ದಿನಾಂಕ: 03.09.2025ರನ್ವಯ ಪರಿಷ್ಕೃತ ಮೀಸಲಾತಿ ಬಿಂದುಗಳನ್ನು ಅಳವಡಿಸಿಕೊಂಡು ನೇರ ನೇಮಕಾತಿ ಮಾಡಿಕೊಳ್ಳಬೇಕಾಗಿರುತ್ತದೆ.
- ಬಹುಮುಖ್ಯವಾಗಿ ರಾಜ್ಯದ ಬಹುತೇಕ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿನ ಹುದ್ದೆಗಳು ಪರಿನಿಯಮಗಳ ಮೂಲಕ ಘನತೆವೆತ್ತ ರಾಜ್ಯಪಾಲರಿಂದ ಸೃಜಿಸಲ್ಪಟ್ಟಿದ್ದು, ಆರ್ಥಿಕ ಇಲಾಖೆಯಿಂದ ಸಹಮತಿ ಪಡೆಯದ ಕಾರಣ ಸದರಿ ಹುದ್ದೆಗಳನ್ನು ಭರ್ತಿಮಾಡುವ ಪೂರ್ವದಲ್ಲಿ ಸಕ್ರಮಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಹಿಂಬರಹ ನೀಡಿರುತ್ತದೆ.

ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಅವಶ್ಯವಾಗಿ ಮಾಡಬೇಕಾಗಿರುವ ನೇಮಕಾತಿ ಪ್ರಕ್ರಿಯೆಯನ್ನು ಒಳಗೊಂಡಂತೆ ಸದರಿ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಆರ್ಥಿಕ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಶ್ವವಿದ್ಯಾಲಯಗಳ ಸಂಶೋಧನೆ, ಮೂಲಸೌಲಭ್ಯ, ಅನುದಾನ, ಪಿಂಚಣಿ ಹಾಗೂ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಅನುಕೂಲವಾಗುವಂತೆ ಅಗತ್ಯ ಹುದ್ದೆಗಳ ನೇಮಕಾತಿ ಹಾಗೂ ಇತ್ಯಾದಿ ಅವಶ್ಯಕ ವಿಷಯಗಳ ಕುರಿತು ಹಲವು ಸಭೆಗಳನ್ನು ನಡೆಸಿರುತ್ತದೆ. ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಆಡಳಿತಾತ್ಮಕ/ಶೈಕ್ಷಣಿಕ/ ಸಂಶೋಧನಾತ್ಮಕ/ ಆರ್ಥಿಕವಾಗಿ ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

| | | |
|---|---|---|
| ಇ) | ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸರ್ಕಾರಿ ವಿಶ್ವವಿದ್ಯಾಲಯಗಳನ್ನು ಅವಲಂಬಿಸಿರುವುದರಿಂದ ಅವರಿಗೆ ಗುಣಮಟ್ಟದ ಶಿಕ್ಷಣ ಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ. | ರಾಜ್ಯದಲಿ ವಿಶ್ವವಿದ್ಯಾಲಯಗಳು ಸಂಶೋಧನೆ, ಪಠ್ಯಕ್ರಮ, ಉದ್ಯೋಗಾವಕಾಶ ಮತ್ತು ಡಿಜಿಟಲ್ ಕಲಿಕೆಗಳನ್ನು ಸುಧಾರಿಸಿ ಎಲ್ಲಾ ಪ್ರದೇಶಗಳು ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಶಿಕ್ಷಣವನ್ನು ತಲುಪವಂತೆ ಮಾಡಲು ಸರ್ಕಾರವು ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ಮಾಹಿತಿಯನ್ನು **ಅನುಬಂಧ-2ರಲ್ಲಿರಿಸಿದೆ.** |
| ಈ) | ಅನುದಾನದ ಕೊರತೆ, ಒಳ ಮೀಸಲಾತಿ ಮುಂತಾದ ಕುಂಟು ನೆಪಗಳನ್ನು ಹೇಳಿ ವಿಶ್ವವಿದ್ಯಾಲಯಗಳಲ್ಲಿ ಬೋಧಕ ಸಿಬ್ಬಂದಿ ನೇಮಕ ಮಾಡದೇ ಉನ್ನತ ಶಿಕ್ಷಣದ ಅವನತಿಗೆ ಸರ್ಕಾರವೇ ಹೊಣೆಯಲ್ಲವೇ; | ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿ ಬರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳ ನೇಮಕಾತಿ, ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನದಲ್ಲಿರುತ್ತದೆ. |
| ಉ) | ಹೊಸ ವಿಶ್ವವಿದ್ಯಾಲಗಳು ಪ್ರಾರಂಭವಾಗಿರುವುದರಿಂದ ಹೊಸ ಮತ್ತು ಹಳೆ ವಿಶ್ವವಿದ್ಯಾಲಯಗಳಿಗೆ ಅನುದಾನದ ಕೊರತೆ ಉಂಟಾಗಿದ್ದು, ಅದನ್ನು ಸರಿದೂಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು? | ಹೊಸ ವಿಶ್ವವಿದ್ಯಾಲಯಗಳಿಗೆ ಆಯವ್ಯಯದಲ್ಲಿ ಕಳೆದ 03 ವರ್ಷಗಳಲ್ಲಿ ಹಂಚಿಕೆಯಾಗಿರುವ ಅನುದಾನದ ವಿವರವನ್ನು ಹಾಗೂ 2025-26ನೇ ಸಾಲಿಗೆ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಿಗೆ ಹಂಚಿಕೆಯಾಗಿರುವ ಅನುದಾನದ ವಿವರವನ್ನು **ಅನುಬಂಧ-3ರಲ್ಲಿರಿಸಿದೆ.**<br><br>ಉಪ ಪ್ರಶ್ನೆ (ಆ)ಗೆ ಉತ್ತರ ನೀಡಲಾಗಿದೆ. |

**ಸಂಖ್ಯೆ**: ಇಡಿ 370 ಯುಎನ್‌ಇ 2025

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು

## ಅನುಬಂಧ-1

| ಕ್ರ.ಸಂ | ವಿಶ್ವವಿದ್ಯಾಲಯಗಳ ಹೆಸರು | ಖಾಲಿಯಿರುವ ಬೋಧಕ ಹುದ್ದೆಗಳು |
|---|---|---|
| 1 | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 391 |
| 2 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 92 |
| 3 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು | 65 |
| 4 | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 171 |
| 5 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು | 00 |
| 6 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 55 |
| 7 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು | 33 |
| 8 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಮೈಸೂರು | 13 |
| 9 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಗೊಟಗೋಡಿ, ಹಾವೇರಿ | 15 |
| 10 | ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ | 82 |
| 11 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 33 |
| 12 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 150 |
| 13 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ | 272 |
| 14 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 37 |
| 15 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 58 |
| 16 | ಕರ್ನಾಟಕ ರಾಜ್ಯ ಅಕ್ಕಮಹಾ ದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ | 45 |
| 17 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 422 |
| 18 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 245 |
| 19 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 151 |
| 20 | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 103 |
| 21 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ. | 62 |
| 22 | ಡಾ. ಬಿ.ಆರ್. ಅಂಬೇಡ್ಕರ್ ವಿಶ್ವವಿದ್ಯಾಲಯ, ಬೆಂಗಳೂರು. | 17 |
| 23 | ನೃಪತುಂಗ ವಿಶ್ವವಿದ್ಯಾಲಯ | 100 |
| 24 | ಹಾಸನ ವಿಶ್ವವಿದ್ಯಾಲಯ, ಹಾಸನ | 27 |
| 25 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 36 |
| 26 | ಬೀದರ್ ವಿಶ್ವವಿದ್ಯಾಲಯ, ಬೀದರ್ | 29 |
| 27 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 12 |
| 28 | ಕೊಡಗು ವಿಶ್ವವಿದ್ಯಾಲಯ, ಕೊಡಗು | 80 |
| 29 | ಬಾಗಲಕೋಟೆ ವಿಶ್ವವಿದ್ಯಾಲಯ, ಜಮಖಂಡಿ | 12 |
| 30 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 34 |
| 31 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 92 |
| 32 | ಯುವಿಸಿಇ ವಿಶ್ವವಿದ್ಯಾಲಯ | 74 |
| | ಒಟ್ಟು | 2997 |

## ಅನುಬಂಧ-2

1. ಭಾರತ ಸರ್ಕಾರದ ರೂಸಾ ಯೋಜನೆಯಡಿಯಲ್ಲಿ ಹೊಸದಾಗಿ 02 ವಸತಿ ಸಹಿತ ಮಾದರಿ ಕಾಲೇಜುಗಳನ್ನು ತೆರೆಯಲಾಗಿದೆ ಮತ್ತು 05 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ವಸತಿ ಸಹಿತ ಮಾದರಿ ಕಾಲೇಜುಗಳನ್ನಾಗಿ ಉನ್ನತೀಕರಿಸಲಾಗಿದೆ.
2. ರಾಜ್ಯದ SCP/TSP ಹಾಗೂ KKRDB ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಒಳಗೊಂಡಂತೆ ಹೊಸದಾಗಿ 09 ವಸತಿಸಹಿತ ಮಾದರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲಾಗಿದೆ.
3. KKRDB ಅನುದಾನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ವಿಶ್ವವಿದ್ಯಾಲಯಗಳನ್ನು ಉನ್ನತೀಕರಿಸಲು ಕ್ರಮಕೈಗೊಳ್ಳಲಾಗಿದೆ.
4. ಬೀದರ್, ತಳಕಲ್, ಗಂಗಾವತಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳನ್ನು ತೆರೆಯಲಾಗಿದೆ.
5. ಕೌಶಲ್ಯ ಹಾಗೂ ಉದ್ಯೋಗಾಭಿವೃದ್ಧಿಗೆ ಒತ್ತು ನೀಡಿ ಪ್ರವೇಶಾತಿಯನ್ನು ಹೆಚ್ಚಿಸುವ ಸಲುವಾಗಿ AEDP (Apprenticeship Embedded Degree Programme ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ.
6. ಕಲಿಕೆ ಜೊತೆ ಕೌಶಲ್ಯಾಧಾರಿತ ಕೋರ್ಸ್‌ಗಳನ್ನು KSDC ಸಹಯೋಗದಲ್ಲಿ ಪ್ರಾರಂಭಿಸಲಾಗಿದೆ.
7. ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ರಾಜ್ಯ ಸರ್ಕಾರದ ನೀತಿಯಂತೆ ರಾಜ್ಯದಲ್ಲಿ ಕಲಿಕೆ ಮತ್ತು ಕೌಶಲ್ಯ, ಕಲಿಕೆ ಜೊತೆ ಕೌಶಲ್ಯ, ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ, ಅಮೃತ ಮುನ್ನಡೆ ಹಾಗೂ Karnataka German Multi Skills Development Centre (KGMSD) ಅಡಿಯಲ್ಲಿ ಬೆಂಗಳೂರು, ಕಲಬುರಗಿ, ಬೆಳಗಾವಿ, ಮಂಗಳೂರು, ಹುಬ್ಬಳ್ಳಿ, ಮೈಸೂರು, ಗೌರಿಬಿದನೂರು, ಕಾರ್ಕಳ ಇಲ್ಲಿ ಕಲಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ.
8. ರಾಜ್ಯದಲ್ಲಿ ಉದ್ಯೋಗಧಾರಿತ ಮಾರುಕಟ್ಟೆಯ ಬೇಡಿಕೆಗೆ ಅನುಗುಣವಾಗಿ 226 ಸರ್ಕಾರಿ ಕಾಲೇಜುಗಳಲ್ಲಿ ಹೊಸ ಕೋರ್ಸ್ ಮತ್ತು ಕಾಂಬಿನೇಷನ್‌ಗಳನ್ನು ತೆರೆಯಲಾಗಿದೆ ಹಾಗೂ 15 ವಿವಿಧ ಉದ್ಯೋಗಾಧಾರಿತ ಕೋರ್ಸ್‌ಗಳನ್ನು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ತೆರೆಯಲಾಗಿದೆ.
9. ಉದ್ಯೋಗ ಮತ್ತು ಉದ್ಯೋಗಾಧಾರಿತ ಶಿಕ್ಷಣವನ್ನು ನೀಡಲು ಅಜೀಪ್ರೇಮಂಜಿ, ಎಚ್‌ಪಿ, ಟೊಯೊಟೊ ಮುಂತಾದ ಕೈಗಾರಿಕೋದ್ಯಮಗಳೊಂದಿಗೆ MoU ಮೂಲಕ ಒಡಂಬಡಿಕೆ ಮಾಡಿಕೊಂಡು ಶಿಕ್ಷಣವನ್ನು ನೀಡಲಾಗುತ್ತಿದೆ.
10. ಉದ್ಯೋಗ ಸೃಷ್ಟಿಸುವಂತಹ ಬಿಸಿಎ ಮತ್ತು ಬಿಬಿಎ ಕೋರ್ಸ್‌ಗಳನ್ನು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿದೆ.
11. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ಪದವಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಪ್ರವೇಶಾತಿಯನ್ನು ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಯುಎನ್‌ಇ 2020, ದಿನಾಂಕ: 29.10.2020ರನ್ವಯ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.
12. ಹೆಣ್ಣು ಮಕ್ಕಳನ್ನು ಉನ್ನತ ಶಿಕ್ಷಣದಲ್ಲಿ ಉತ್ತೇಜಿಸಲು ಸರ್ಕಾರಿ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಶುಲ್ಕ ಮರು ಪಾವತಿ ಯೋಜನೆ ಜಾರಿಯಲ್ಲಿರುತ್ತದೆ.
13. ಸಮಾಜ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ:ಸಕಇ 83 ಪಕವಿ 2013, ದಿನಾಂಕ: 27.06.2013ರಲ್ಲಿ ರಾಜ್ಯ ವಿಶ್ವವಿದ್ಯಾಲಯಗಳಲ್ಲಿ / ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ / ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ ಆದೇಶವನ್ನು ಹೊರಡಿಸಲಾಗಿರುತ್ತದೆ.
14. ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಹಾಗೂ ಪ್ರಯೋಗಾಲಯ ಶುಲ್ಕದಿಂದ ವಿನಾಯಿತಿ ನೀಡಲಾಗಿರುತ್ತದೆ.

15.ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶ ಸಂಖ್ಯೆ: ಹಿಂವಇ 397 ಬಿಎಂಎಸ್ 2013, ದಿನಾಂಕ: 05.09.2013ರನ್ವಯ ಹಿಂದುಳಿದ ವರ್ಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸುವ ಹಿತದೃಷ್ಟಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಯೋಜನೆ / ಕಾರ್ಯಕ್ರಮಗಳಿಗೆ ಆದಾಯ ಮಿತಿಯನ್ನು ಪರಿಷ್ಕರಿಸಿರುತ್ತದೆ.

16.ಸರ್ಕಾರಿ ಪ್ರಥಮ ದರ್ಜೆಯ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪದವಿ ನಂತರದ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡುತ್ತಿದ್ದು ಉದ್ಯೋಗ ಮೇಳಗಳ ಆಯೋಜನೆ, ಕೌಶಲ್ಯ ತರಬೇತಿ, ಗ್ರಂಥಾಲಯ ಸೌಲಭ್ಯ, ಪ್ರಯೋಗಾಲಯ ಸೌಲಭ್ಯ, smart class, N.C.C./N.S.S,ಕ್ರೀಡಾ ಚಟುವಟಿಕೆಗಳಿಗೆ ತರಬೇತಿ ನೀಡಲಾಗುತ್ತದೆ.

17.ಆರ್ಥಿಕವಾಗಿ ಹಿಂದುಳಿದ ಕುಟುಂಬದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಪ್ರೋತ್ಸಾಹಕ್ಕಾಗಿ ರಾಜೀವ್ ಗಾಂಧಿ ಸಾಲ ರೂಪದ ವಿದ್ಯಾರ್ಥಿ ವೇತನ ಯೋಜನೆಯಡಿ ವಿದ್ಯಾರ್ಥಿಗಳು ಬ್ಯಾಂಕುಗಳಲ್ಲಿ ಪಡೆಯುವ ಸಾಲಕ್ಕೆ ಶೈಕ್ಷಣಿಕ ಅವಧಿಗೆ ಇಲಾಖೆಯಿಂದ ಬ್ಯಾಂಕುಗಳಿಗೆ ಬಡ್ಡಿ ಸಬ್ಸಿಡಿ ನೀಡಲಾಗುತ್ತಿದೆ.

18.ಇಲಾಖಾ ವ್ಯಾಪ್ತಿಯಡಿ ಬರುವ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಿಗೆ (ಅನುದಾನಿತ ಕೋರ್ಸುಗಳಿಗೆ ಮಾತ್ರ) ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುವ ಆರ್ಥಿಕವಾಗಿ ಹಿಂದುಳಿದ ಕುಟುಂಬದಿಂದ ಬಂದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಪ್ರೋತ್ಸಾಹಕ್ಕಾಗಿ ರಾಜ್ಯ ಸರ್ಕಾರವು ರಾಜೀವ್ ಗಾಂಧಿ ಸಾಲ ರೂಪದ ವಿದ್ಯಾರ್ಥಿ ವೇತನದ ಬಡ್ಡಿ ಸಬ್ಸಿಡಿ ಯೋಜನೆಯನ್ನು ಜಾರಿಗೆ ತರಲಾಗಿದೆ.

19.ವಿದ್ಯಾರ್ಥಿಗಳು ಯಾವುದೇ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಶೈಕ್ಷಣಿ ಸಾಲ ಪಡೆದಿದ್ದಲ್ಲಿ ಸದರಿ ವಿದ್ಯಾರ್ಥಿಗಳು ಪಾವತಿಸಬೇಕಾದ ಬಡ್ಡಿ ಮೊತ್ತವನ್ನು ಇಲಾಖೆಯಿಂದ ಬ್ಯಾಂಕುಗಳಿಗೆ ಪಾವತಿಸಲಾಗುವುದು.

20.ದ್ವಿತಿಯ ಪಿ.ಯು.ಸಿ. ಉತ್ತೀರ್ಣಗೊಂಡು ವಿವಿಧ ಪದವಿ ತರಗತಿಗೆ ಪ್ರವೇಶ ಪಡೆಯುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸಂಚಿ ಹೊನ್ನಮ್ಮ ಮತ್ತು ಸರ್.ಸಿ.ವಿ.ರಾಮನ್ ವಿದ್ಯಾರ್ಥಿ ವೇತನದ ಮಂಜೂರಾತಿ ಯೋಜನೆಯು ಜಾರಿಯಲ್ಲಿರುತ್ತದೆ.

21.ಹೆಣ್ಣು ಮಕ್ಕಳ ಪ್ರವೇಶಾತಿಯನ್ನು ಉತ್ತೇಜಿಸಲು ವಿದ್ಯಾರ್ಥಿ ವೇತನ, ಉಚಿತ ಶುಲ್ಕದ ಜೊತೆಗೆ ವಾರ್ಷಿಕ ರೂ. 30,000/- ಗಳನ್ನು ರಾಜ್ಯದ 37500 ವಿದ್ಯಾರ್ಥಿನಿಯರಿಗೆ ಅಜೀಂ ಪ್ರೇಂಜಿ ಫೌಂಡೇಷನ್ ಒಡಗೂಡಿ “ದೀಪಿಕ” ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

22.ಸರ್ಕಾರದ ಆದೇಶ ಸಂಖ್ಯೆ: ಇಡಿ 102 ಯುಎನ್ಇ 2009, ದಿನಾಂಕ: 04.06.2009ರಲ್ಲಿ ಯಾವುದೇ ಒಬ್ಬ ವಿದ್ಯಾರ್ಥಿಯು ಪ್ರವೇಶಾತಿ ಕೋರಿ ಬಂದಲ್ಲಿ ಆತನಿಗೆ / ಆಕೆಗೆ ಪ್ರವೇಶಾತಿಯನ್ನು ನಿರಾಕರಿಸುವಂತಿಲ್ಲವೆಂದು ಆದೇಶ ಹೊರಡಿಸಲಾಗಿದ್ದು, ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೂ ಪ್ರವೇಶಾತಿಯನ್ನು ನೀಡಲಾಗುತ್ತಿದೆ.

<u>ಅನುಬಂಧ-3</u>

**ಹೊಸ ವಿಶ್ವವಿದ್ಯಾಲಯಗಳಿಗೆ ಆಯವ್ಯಯದಲ್ಲಿ ಕಳೆದ 03 ವರ್ಷಗಳಲ್ಲಿ ಹಂಚಿಕೆಯಾಗಿರುವ ಅನುದಾನದ ವಿವರ:**

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ವಿಶ್ವವಿದ್ಯಾಲಯದ ಹೆಸರು | 2023-24 | 2024-25 | 2025-26 |
|---|---|---|---|---|
| 1 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 100.00 | 43.42 | 106.40 |
| 2 | ಹಾಸನ ವಿಶ್ವವಿದ್ಯಾಲಯ, ಹಾಸನ | 100.00 | 57.25 | 48.40 |
| 3 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 100.00 | 115.17 | 140.73 |
| 4 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 100.00 | 78.06 | 102.05 |
| 5 | ಕೊಡಗು ವಿಶ್ವವಿದ್ಯಾಲಯ, ಕೊಡಗು | 100.00 | 40.15 | 81.05 |
| 6 | ಬೀದರ್ ವಿಶ್ವವಿದ್ಯಾಲಯ, ಬೀದರ್ | 100.00 | 82.69 | 104.56 |
| 7 | ಬಾಗಲಕೋಟೆ ವಿಶ್ವವಿದ್ಯಾಲಯ, ಜಮಖಂಡಿ | 100.00 | 73.30 | 302.56 |

**2025-26 ನೇ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ವಿಶ್ವವಿದ್ಯಾಲಯಗಳು ಬಿಡುಗಡೆ ಮಾಡಲಾದ ಅನುದಾನದ ವಿವರ**

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ವಿಶ್ವವಿದ್ಯಾಲಯಗಳು | ಲೆಕ್ಕಶೀರ್ಷಿಕೆ | 2025-26ನೇ ಸಾಲಿಗೆ ಒಟ್ಟು ಹಂಚಿಕೆಯಾದ ಮೊತ್ತ | ಬಿಡುಗಡೆಯಾದ ಒಟ್ಟು ಮೊತ್ತ |
|---|---|---|---|---|
| 1 | ಮೈಸೂರು ವಿಶ್ವವಿದ್ಯಾಲಯ 2202-03-102-0-1 | 101-ಸಹಾಯಾನುದಾನ-ವೇತನಗಳು | 12768.71 | 12768.71 |
| | | 118-ಸಹಾಯಾನುದಾನ-ವಿಶ್ರಾಂತಿ ವೇತನ | 5000.00 | 5000.00 |
| 2 | ಕನಾಟಕ ವಿಶ್ವವಿದ್ಯಾಲಯ 2202-03-102-0-02 | 101-ಸಹಾಯಾನುದಾನ-ವೇತನಗಳು | 10884.09 | 10884.09 |
| | | 118 – ಸಹಾಯಾನುದಾನ-ವಿಶ್ರಾಂತಿ ವೇತನ | 5500.00 | 5500.00 |
| 3 | ಬೆಂಗಳೂರು ವಿಶ್ವವಿದ್ಯಾಲಯ 2202-03-102-0-03 | 101-ಸಹಾಯಾನುದಾನ-ವೇತನಗಳು | 8828.73 | 8828.73 |
| | | 118 – ಸಹಾಯಾನುದಾನ-ವಿಶ್ರಾಂತಿ ವೇತನ | 500.00 | 500.00 |
| 4 | ಗುಲ್ಬರ್ಗಾ ವಿಶ್ವವಿದ್ಯಾಲಯ 2202-03-102-0-04 | 101-ಸಹಾಯಾನುದಾನ-ವೇತನಗಳು | 3512.61 | 3512.61 |
| | | 118 – ಸಹಾಯಾನುದಾನ-ವಿಶ್ರಾಂತಿ ವೇತನ | 1650.00 | 1650.00 |
| 5 | ಮಂಗಳೂರು ವಿಶ್ವವಿದ್ಯಾಲಯ 2202-03-102-0-05 | 101-ಸಹಾಯಾನುದಾನ-ವೇತನಗಳು | 6334.66 | 6334.66 |
| | | 118 – ಸಹಾಯಾನುದಾನ-ವಿಶ್ರಾಂತಿ ವೇತನ | 1500.00 | 1500.00 |

| | | | | |
|---|---|---|---|---|
| 6 | ಕನ್ನಡ ವಿಶ್ವವಿದ್ಯಾಲಯ 2202-03-102-0-06 | 101- ಸಹಾಯಾನುದಾನ- ವೇತನಗಳು | 2757.21 | 2757.21 |
| | | 103- ಸಹಾಯಾನುದಾನ ಸಾಮಾನ್ಯ | 191.50 | 191.50 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1400.00 | 1400.00 |
| | | 422- ಪರಿಶಿಷ್ಟ ಜಾತಿ ಉಪ ಯೋಜನೆ | 6.02 | 4.52 |
| | | 423- ಗಿರಿಜನ ಉಪ ಯೋಜನೆ | 2.48 | 1.86 |
| 7 | ಕುವೆಂಪು ವಿಶ್ವವಿದ್ಯಾಲಯ 2202-03-102-0-08 | 101- ಸಹಾಯಾನುದಾನ- ವೇತನಗಳು | 7281.03 | 7281.03 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1000.00 | 1000.00 |
| 8 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ 2202-03-102-0-22 | 101- ಸಹಾಯಾನುದಾನ- ವೇತನಗಳು | 1972.28 | 1972.28 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 5.00 | 5.00 |
| 9 | ತುಮಕೂರು ವಿಶ್ವವಿದ್ಯಾಲಯ 2202-03-102-0-23 | 101- ಸಹಾಯಾನುದಾನ- ವೇತನಗಳು | 4428.69 | 4428.69 |
| | | 102- ಸಹಾಯಾನುದಾನ- ಆಸ್ತಿಗಳ ಸೃಜನೆ | 500.00 | 375.00 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 50.00 | 50.00 |
| 10 | ದಾವಣಗೆರೆ ವಿಶ್ವವಿದ್ಯಾಲಯ 2202-03-102-0-31 | 101- ಸಹಾಯಾನುದಾನ- ವೇತನಗಳು | 3665.77 | 3665.77 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1.00 | 0.00 |
| 11 | ವಿಜಯನಗರ ವಿಶ್ವವಿದ್ಯಾಲಯ 2202-03-102-0-33 | 101- ಸಹಾಯಾನುದಾನ- ವೇತನಗಳು | 2522.93 | 2522.93 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1.00 | 0.00 |
| 12 | ಬೆಳಗಾವಿ ವಿಶ್ವವಿದ್ಯಾಲಯ 2202-03-102-0-34 | 101- ಸಹಾಯಾನುದಾನ -ವೇತನಗಳು | 3905.34 | 3905.34 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1.00 | 0.00 |

| | | | | |
|---|---|---|---|---|
| 13 | ಜಾನಪದ ವಿಶ್ವವಿದ್ಯಾಲಯ 2202-03-102-0-35 | 101- ಸಹಾಯಾನುದಾನ -ವೇತನಗಳು | 479.39 | 479.39 |
| | | 103- ಸಹಾಯಾನುದಾನ ಸಾಮಾನ್ಯ | 38.00 | 28.50 |
| | | 422- ಪರಿಶಿಷ್ಟ ಜಾತಿ ಉಪ ಯೋಜನೆ | 8.50 | 4.25 |
| | | 423- ಗಿರಿಜನ ಉಪ ಯೋಜನೆ | 3.50 | 2.63 |
| 14 | ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ 2202-03-102-0-39 | 101- ಸಹಾಯಾನುದಾನ- ವೇತನಗಳು | 664.36 | 664.36 |
| 15 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ 2202-03-102-0-39 | 101- ಸಹಾಯಾನುದಾನ- ವೇತನಗಳು | 305.92 | 305.92 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 1.00 | 0.00 |
| 16 | ಸಂಗೀತ ವಿಶ್ವವಿದ್ಯಾಲಯ 2205-00-101-0-08 | 101- ಸಹಾಯಾನುದಾನ- ವೇತನಗಳು | 123.54 | 123.54 |
| | | 103- ಸಹಾಯಾನುದಾನ ಸಾಮಾನ್ಯ | 100.00 | 100.00 |
| 17 | ಸಂಸ್ಕೃತ ವಿಶ್ವವಿದ್ಯಾಲಯ 2202-05-103-0-23 | 101- ಸಹಾಯಾನುದಾನ- ವೇತನಗಳು | 1268.68 | 1268.68 |
| | | 103- ಸಹಾಯಾನುದಾನ ಆಸ್ತಿಗಳ ಸೃಜನೆ | 0.00 | 0.00 |
| | | 118 – ಸಹಾಯಾನುದಾನ- ವಿಶ್ರಾಂತಿ ವೇತನ | 0.00 | 0.00 |
| 18 | ಡಾ\|\| ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ 2202-03-112-0-18 | 101- ಸಹಾಯಾನುದಾನ - ವೇತನ | 118.45 | 118.45 |
| 20 | ನೃಪತುಂಗ ವಿಶ್ವವಿದ್ಯಾಲಯ | 2202-03-102-0-44-101 | 103.71 | 103.71 |
| 21 | ಮಹಾರಾಣಿ ವಿಶ್ವವಿದ್ಯಾಲಯ | 2202-03-102-0-43-101 | 146.43 | 146.83 |
| 22 | ಮಂಡ್ಯ ವಿಶ್ವವಿದ್ಯಾಲಯ | 2202-03-102-0-42-101 | 68.43 | 68.43 |
| 23 | ರಾಯಚೂರು ವಿಶ್ವವಿದ್ಯಾಲಯ | 2202-03-102-0-41-101 | 223.68 | 223.68 |
| 21 | ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಅನುದಾನ 2202-03-102-0-52 | 103- ಸಹಾಯಾನುದಾನ - ಸಾಮಾನ್ಯ | 850.00 | 850.00 |
| | **ಒಟ್ಟು** | | **90673.64** | **90528.30** |